## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 20.03.2021 ರ
### ಸಭಾ ನಡುವಳಿ

ದಿನಾಂಕ: 20.03.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಮಹದೇವಪ್ಪ | ರೆವಿನ್ಯೂ ಇನ್ಸ್‌ಪೆಕ್ಟರ್ ವಾರ್ಡ್ ನಂ. 05 |
| 4 | ಸೋಮಶೇಖರ್ | ವ್ಯವಸ್ಥಾಪಕರು, ಸ.ಕಂ.ಅ ಬ್ಯಾ.ಉ.ವಿ |
| 5 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 6 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್-19ರ ಸಂಬಂಧ ಮುಜಾಗ್ರತ ಕ್ರಮಗಳ ಬಗ್ಗೆ.** ವಾರ್ಡ್ ಸ.ಅ ರವರು ಮಾತನಾಡಿ ಬೆಂಗಳೂರು ನಗರದಲ್ಲಿ ದಿನೇ ದಿನೇ ಸೋಂಕು ಹೆಚ್ಚಾಗುತ್ತಿದ್ದು ಕರೊನಾ 2ನೇ ಅಲೆಯ ಮುನ್ಸೂಚನೆಯಂತೆ ಕಾಣುತ್ತಿದೆ ಆದುದರಿಂದ ಸಾರ್ವಜನಿಕರು ಕಡ್ಡಾಯವಾಗಿ ಸಮಾಜಿಕ ಅಂತರ ಮತ್ತು ಮಾಸ್ಕಗಳ ಬಳಕೆಗೆ ಹೆಚ್ಚಿನ ಒತ್ತು ನೀಡುವಂತೆ ವಾರ್ಡ್ ವ್ಯಾಪ್ತಿಯಲ್ಲಿ ಅರಿವು ಮೂಡಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.
2. ರಾಜೇಂದ್ರ ಹೆಗಡೆ, ಟೆಲಿಕಾಂ ಬಡಾವಣೆ, ರವರು ಮಾತನಾಡಿ



Scanned by CamScanner

ಟೆಲಿಕಾಂ ಬಡಾವಣೆಯಲ್ಲಿರುವ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಿಂದ ಸಮರ್ಪಕವಾಗಿ ನೀರಿನ ಸರಬರಾಜು ಮಾಡುತ್ತಿರುವುದಿಲ್ಲ ಅಲ್ಲದೇ ಬೇಸಿಗೆ ಪ್ರಾರಂಭವಾಗಿರುವುದರಿಂದ ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆಯನ್ನು ಬಗೆಹರಿಸುವಂತೆ ಕೋರಿದರು ಇದಕ್ಕೆ ನೋಡೆಲ್ ಅಧಿಕಾರಿಯವರು ಈ ಬಗ್ಗೆ ಕ್ರಮ ವಹಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳೀಗೆ ಸೂಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಏರ್‌ಟೆಲ್ ಮತ್ತು ಜಿಯೋ ಕಂಪನಿಯವರು ಅಸಮರ್ಪಕವಾಗಿ ರಸ್ತೆ ಕತ್ತರಿಸಿ ರಸ್ತೆಯನ್ನು ಸರಿಯಾಗಿ ಮುಚ್ಚದೇ ಸಾರ್ವಜನಿಕರ ಓಡಾಟಕ್ಕೆ ತುಂಬ ತೊಂದರೆಯಾಗುತ್ತಿರುತ್ತದೆ ಎಂದು ತಿಳಿಸಿದರು.

3. ದೀಪಕ್ ಮೋ ನಂ. 9901688144 ರವರು ಮಾತನಾಡಿ ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆಯಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸರಿಯಾಗಿ ನಿರ್ವಸುತ್ತಿರುವುದಿಲ್ಲವೆಂದು ತಿಳಿಸಿದರು ಈ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಲಾಯಿತು. ಹಾಗೂ ಬಡಾವಣೆಯ 7ನೇ ಅಡ್ಡರಸ್ತೆಯ ಮತ್ತು 11ನೇ ಅಡ್ಡರಸ್ತೆಯ ಉದ್ಯಾನವನದಲ್ಲಿ ಬೀದಿ ದೀಪ ಅಳವಡಿಸಲು ಕೋರಿದರು.
4. ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಿಯಾದ ಅಧಿಕಾರಿಗಳ ಮೇಲೆ ಕ್ರಮ ವಹಿಸಲು ಕೋರಿದರು. ಇದಕ್ಕೆ ನೋಡೆಲ್ ಅಧಿಕಾರಿಯವರು ಮಾತನಾಡಿ ಜಂಟಿ ಆಯುಕ್ತರು, ಯಲಹಂಕ ವಲಯ ರವರ ಗಮನಕ್ಕೆ ಲಿಖಿತ ಮೂಲಕ ತಿಳಿಸಲಾಗುವುದೆಂದು ಹಾಗೂ ನೋಟಿಸ್‌ಗಳನ್ನು ನೀಡಲು ಕೋರಲಾಗುವುದೆಂದು ತಿಳಿಸಿದರು.
5. ಪ್ರಮೋದ್ ಶ್ರೀರಾಂಪುರ ರವರು ಮಾತನಾಡಿ ರಾಚೇನಹಳ್ಳೀ ಕೆರೆ ಗೇಟ್ ಮುಂಭಾಗ ಒಳಚರಂಡಿ ನೀರು ಮ್ಯಾನ್‌ಹೋಲ್‌ಗಳಲ್ಲಿ ಉಕ್ಕಿ ಹರಿಯುತ್ತಿರುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸಲು ಕೋರಿದರು ಈ ಬಗ್ಗೆ ನೊಡೆಲ್ ಅಧಿಕಾರಿಗಳು ಮಾತನಾಡಿ ಕೆರೆಗಳ ವಿಭಾಗದ ಅಧಿಕಾರಿಗಳಿಗೆ ಕ್ರಮ ವಹಿಸಲು ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್–19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾನುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)
20/03/2021

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned by CamScanner